ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	1776
ಮಾನ್ಯ ಸದಸ್ಯರ ಹೆಸರು	ಶ್ರೀ ಕುಶಾಲಪ್ಪ ಎಂ. ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	14/03/2022
ಉತ್ತರಿಸಬೇಕಾದ ಸಚಿವರು	ಮಾನ್ಯ ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ಕ್ಷೇತ್ರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇಲ್ಲದಿರುವುದರಿಂದ ಅಲ್ಲಿನ ಸಾರ್ವಜನಿಕರಿಗೆ ಮೈಸೂರು, ಬೆಂಗಳೂರು, ಮಂಗಳೂರಿನಂತಹ ದೂರದ ಆಸ್ಪತ್ರೆಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ.
ಆ)	ಸಾರ್ವಜನಿಕರ ಹಿತದೃಷ್ಟಿಯಿಂದ ಐದು ತಾಲ್ಲೂಕುಗಳನ್ನೊಳಗೊಂಡ ಮಡಿಕೇರಿಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ನಿರ್ಮಾಣ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)	ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿಯು ಅಧೀನ ಬೋಧಕ ಆಸ್ಪತ್ರೆಯು 300 ಹಾಸಿಗೆ ಸಾಮರ್ಥ್ಯ ಹೊಂದಿದ್ದು, ಹೆಚ್ಚುವರಿಯಾಗಿ 450 ಹಾಸಿಗೆ ಸಾಮಾರ್ಥ್ಯದ ಆಸ್ಪತ್ರೆ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು, ಲಭ್ಯವಿರುವ ಎಲ್ಲಾ ಚಿಕಿತ್ಸೆಗಳನ್ನು ಆಸ್ಪತ್ರೆಯಲ್ಲಿಯೇ ಒದಗಿಸಲಾಗುತ್ತಿದೆ. ಸೂಪರ್ ಸ್ಪೆಷಾಲಿಟಿ ಚಿಕಿತ್ಸೆ ಅಗತ್ಯವಿರುವ ಕೆಲವೇ ಸಂದರ್ಭಗಳಲ್ಲಿ ಮಾತ್ರ ರೋಗಿಯ ಇಚ್ಛಾನುಸಾರ ಶಿಫಾರಸ್ಸು ಮಾಡಲಾಗುತ್ತಿದೆ. ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಮಡಿಕೇರಿ ಇಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ನಿರ್ಮಾಣ ಮಾಡುವ ಬಗೆಗಿನ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ಕಡತ ಸಂ: ಎಂಇಡಿ 120 ಎಂ ಎಸ್ ಎಫ್ 2022

(ಡಾ|| ಕೆ. ಸುಧಾಕರ್)
ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.